ಸ್ವಾತಂತ್ರೋತ್ಸವದ ಸ್ವರ್ಣ ಜಯಂತಿ ಕಾರ್ಯಕ್ರಮಗಳ ಕುರಿತು

2347 - ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸ್ವಾತಂತ್ರ್ಯೋತ್ಸವ ಸ್ವರ್ಣ ಜಯಂತಿ ಪ್ರಯುಕ್ತ ರಾಜ್ಯ ಜನತೆಗಾಗಿ ಸರ್ಕಾರವು ಯಾವ ಯಾವ ಹೊಸ ಯೋಜನೆಗಳನ್ನು ಹಮ್ಮಿಕೊಂಡಿದೆ?

ಆ) ಅದರಲ್ಲೂ ನಿರುದ್ಯೋಗ, ಬಡತನ ನಿವಾರಣೆ ಬಗ್ಗೆ ಸರ್ಕಾರದ ನಿಲುವೇನು?

ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಪ್ರವಾಸೋದ್ಯಮ,ಕನ್ನಡ ಮತ್ತು ಸಂಸತಿ ರಾಜ್ಯ ಸಚಿವರು) :

ಅ)

1) ಭಾರತ ಸ್ವಾತಂತ್ರ್ಯದ ಸುವರ್ಣ ಮಹೋತ್ಸವದ ಆಚರಣೆಯ ಬಗ್ಗೆ ಜನರಲ್ಲಿ ಅರಿವು ಹಾಗೂ ಪ್ರಜ್ಞೆ ಮೂಡಿಸುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

2) ದಿನಾಂಕ : 14.8.87 ರಂದು ಸಂಜೆ 7.00 ಗಂಟೆಗೆ ವಿಧಾನ ಸೌಧದ ಮುಂದೆ ಸಾಂಸ್ಕೃತಿಕ ಸೌರಭ ಕಾರ್ಯಕ್ರಮಗಳಲ್ಲಿ ಪ್ರಮುಖ ಕಲಾವಿದರಾದ ಪಂಡಿತ್ ಭೀಮಸೇನ್ ಜೋಶಿ, ಡಾ॥ ಗಂಗೂಬಾಯಿ ಹಾನಗಲ್, ಡಾ॥ ರಾಜಕುಮಾರ್, ಡಾ॥ ವೀಣೆ ದೊರೆಸ್ವಾಮಿ ಅಯ್ಯಂಗಾರ್ ಇನ್ನೂ ಮುಂತಾದವರುಗಳು ಭಾಗವಹಿಸಲಿದ್ದಾರೆ.

3) ಸ್ವಾತಂತ್ರ್ಯ ಚಳುವಳಿಯ ಘಟನಾವಳಿಗಳನ್ನು ಪ್ರತಿಬಿಂಬಿಸುವ ಸ್ತಬ್ದಚಿತ್ರ ಹಾಗೂ ಜಾನಪದ ತಂಡಗಳ ಶೋಭಾ ಯಾತ್ರೆಯನ್ನು ನಡೆಸಲಾಗುತ್ತದೆ.

4) 15.8.97 ರಂದು ರಾಜ್ಯ, ಜಿಲ್ಲಾ, ಗ್ರಾಮ ಮಟ್ಟದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲಾಗುವುದು.

5) 16.8.97 ರಿಂದ 31.8.97 ರವರೆಗೆ ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲಾಗುವುದು.

6) ಅಕ್ಟೋಬರ್ 97 ರಂದು ದೆಹಲಿಯಲ್ಲಿ ಏರ್ಪಡಿಸಲಾಗುವ ರಾಷ್ಟ್ರೀಯ ಮಕ್ಕಳ ಉತ್ಸವದಲ್ಲಿ ಕರ್ನಾಟಕದಿಂದ 50 ಬಾಲಕ ಬಾಲಕಿಯರನ್ನು ಕಾರ್ಯಕ್ರಮದಲ್ಲಿ ಭಾಗವಹಿಸಲು ನಿಯೋಜಿಸಲಾಗಿದೆ.

7) 50 ಜನ ಸ್ವಾತಂತ್ರ್ಯ ಹೋರಾಟಗಾರರಿಗೆ ಸ್ವಾತಂತ್ರ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು.

8) ಭಾರತದ ಸ್ವಾತಂತ್ರ್ಯ ಪೂರ್ವದ ಪರಿಸ್ಥಿತಿ 50 ವರ್ಷಗಳ ಸಾಧನೆ ಅಭಿವೃದ್ಧಿಗೆ ಸವಾಲುಗಳು

ಭವ್ಯ ಭಾರತದ ಕನಸುಗಳು, ಮುಂತಾದ ಕಾರ್ಯಕ್ರಮಗಳ ಕುರಿತ ಸ್ತಬ್ದ ಚಿತ್ರ ನಿರ್ಮಾಣ ಮಾಡಲಾಗುವುದು.

9) ಎರಡು ಸಾವಿರ ಹೊಸ ಶಾಲೆಗಳನ್ನು ಪ್ರಾರಂಭಿಸಲಾಗುವುದು.

10) ಸುವರ್ಣ ಮಹೋತ್ಸವ ಉದ್ಯಾನವನವನ್ನು ನಿರ್ಮಿಸಲಾಗುವುದು.

11) ಶಾಲಾ ಕಾಲೇಜು ಹಾಗೂ ವಿಶ್ವವಿದ್ಯಾನಿಲಯಗಳಲ್ಲಿ ಚರ್ಚಾಸ್ಪರ್ದೆ; ಚಿತ್ರ ಸ್ಪರ್ಧೆ, ಆಶುಭಾಷಣ ಹಾಗೂ ರಸಪ್ರಶ್ನೆ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು.

12) ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆಯಿಂದ ಕಿತ್ತೂರು ರಾಣಿ ಚೆನ್ನಮ್ಮ, ಟಿಪ್ಪು ಸುಲ್ತಾನ್, ಸಂಗೊಳ್ಳಿ ರಾಯಣ್ಣ ಹಾಗೂ ಬಾಬಾ ಸಾಹೇಬ ಅಂಬೇಡ್ಕರ್ ರವರ ಕುರಿತು ಧ್ವನಿ ಮತ್ತು ಬೆಳಕಿನ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು.

13) ಸಾಕ್ಷರತಾ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸುವ ಸಲುವಾಗಿ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

ಆ) ಈ ವಿಷಯದ ಬಗ್ಗೆ ಈ ಇಲಾಖೆಯು ಯಾವ ಯೋಜನೆಗಳನ್ನು ಹಮ್ಮಿಕೊಂಡಿಲ್ಲ.

ರಾಜ್ಯ ಸರ್ಕಾರದ ನಿವೃತ್ತ ನೌಕರರ ಬೇಡಿಕೆಗಳು

2348 - ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ಉಪ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ಸರ್ಕಾರದ ನಿವೃತ್ತ ನೌಕರರ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಅವುಗಳು ಯಾವುವು?

ಇ) ಈ ಬೇಡಿಕೆಗಳನ್ನು ಪರಿಶೀಲಿಸಿ ನ್ಯಾಯಯುತ ಪರಿಹಾರ ನೀಡಲು ಸರ್ಕಾರವು ಯಾವುದಾದರೂ ಸಮಿತಿ ರಚಿಸಿದೆಯೇ?

ಈ) ಹಾಗಿದ್ದಲ್ಲಿ ಈ ಸಮಿತಿಯ ತೀರ್ಮಾನಗಳನ್ನು ಜಾರಿಗೊಳಿಸಲಾಗಿದೆಯೇ?

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯ ಮಂತ್ರಿಗಳು) :

ಅ) ಬಂದಿದೆ.

ಆ) ಅನುಬಂಧದಲ್ಲಿದೆ (ಪ್ರತಿಯನ್ನು ಲಗತ್ತಿಸಲಾಗಿದೆ)

ಇ) ಹೌದು

ಈ) ಸಮಿತಿಯು ಪರಿಶೀಲಿಸುತ್ತಿದೆ.